**ಕರ್ನಾಟಕ ವಿಧಾನಪರಿಷತ್ತು**

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 239 |
| ಸದಸ್ಯರ ಹೆಸರು | ಶ್ರೀಮತಿ ಬಲ್ಕೀಸ್ ಬಾನು<br>(ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | 16-07-2024 |
| ಉತ್ತರಿಸುವ ಸಚಿವರು | ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು |

******

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| (ಅ) | ರಾಜ್ಯದಲ್ಲಿರುವ ಒಟ್ಟು ನಗರಾಭಿವೃದ್ಧಿ ಪ್ರಾಧಿಕಾರಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು / ತಾಲ್ಲೂಕುವಾರು ವಿವರ ನೀಡುವುದು | ರಾಜ್ಯದಲ್ಲಿರುವ ಒಟ್ಟು ನಗರಾಭಿವೃದ್ಧಿ ಪ್ರಾಧಿಕಾರಗಳ ಸಂಖ್ಯೆ:31 (ಬಿ.ಡಿ.ಎ ಮತ್ತು ಬಿ.ಎಂ.ಆರ್.ಡಿ.ಎ ವ್ಯಾಪ್ತಿ ಹೊರತುಪಡಿಸಿ).<br>(ಜಿಲ್ಲಾವಾರು ವಿವರಗಳನ್ನು ಅನುಬಂಧ-1 ರಲ್ಲಿ ಲಗತ್ತಿಸಿದೆ). |
| (ಆ) | ನಗರ ಪ್ರದೇಶಗಳ ಸಂಪೂರ್ಣ ಅಭಿವೃದ್ಧಿಗಾಗಿ ನಗರಾಭಿವೃದ್ಧಿ ಪ್ರಾಧಿಕಾರಗಳನ್ನು ಹೆಚ್ಚಿಸಲು ಸರ್ಕಾರ ಚಿಂತಿಸಿದೆಯೇ; | ಹೌದು.<br>2024-25ನೇ ಸಾಲಿನ ಆಯವ್ಯಯದಲ್ಲಿ ರಾಜ್ಯದಲ್ಲಿನ ಒಂದು ಲಕ್ಷಕ್ಕೂ ಮೇಲ್ಪಟ್ಟ ಎಲ್ಲಾ ಯೋಜನಾ ಪ್ರಾಧಿಕಾರಗಳನ್ನು ನಗರಾಭಿವೃದ್ಧಿ ಪ್ರಾಧಿಕಾರಗಳನ್ನಾಗಿ ಮೇಲ್ದರ್ಜೆಗೇರಿಸಲು ಪ್ರಸ್ತಾಪಿಸಲಾಗಿದೆ.<br>ಅದರಂತೆ, ಒಂದು ಲಕ್ಷಕ್ಕೂ ಮೇಲ್ಪಟ್ಟ ರಾಣೇಬೆನ್ನೂರು ಯೋಜನಾ ಪ್ರಾಧಿಕಾರವನ್ನು ರಾಣೇಬೆನ್ನೂರು ನಗರಾಭಿವೃದ್ಧಿ ಪ್ರಾಧಿಕಾರವನ್ನಾಗಿ ಸರ್ಕಾರದ ಆದೇಶ ಸಂಖ್ಯೆ:ನಅಇ 82 ಬೆಮಪ್ರಾ 2024(ಇ-ಕಡತ), ದಿನಾಂಕ:13-06-2024 ರಂದು ಮೇಲ್ದರ್ಜೆಗೇರಿಸಿ ಆದೇಶಿಸಲಾಗಿದೆ (ಅನುಬಂಧ-2) |
| (ಇ) | ಹೌದಾದಲ್ಲಿ ಈ ಕುರಿತು ಸರ್ಕಾರ ಕೈಗೊಂಡಿರುವ ಕ್ರಮಗಳೇನು? | |

ಕಡತ ಸಂಖ್ಯೆ: ನಅಇ 34 ಎಲ್‌ಸಿಕ್ಯೂ 2024(ಇ)

**(ಬಿ.ಎಸ್. ಸುರೇಶ)**
ಮಾನ್ಯ ನಗರಾಭಿವೃದ್ಧಿ ಮತ್ತು
ನಗರ ಯೋಜನೆ ಸಚಿವರು

# ನಗರಾಭಿವೃದ್ಧಿ ಪ್ರಾಧಿಕಾರಗಳು

**ಅನುಬಂಧ-1**

| ಕ್ರ.ಸಂ. | ಅಭಿವೃದ್ಧಿ ಪ್ರಾಧಿಕಾರಗಳು | ಜಿಲ್ಲೆ |
|---|---|---|
| 1. | ಬೆಳಗಾವಿ ನಗರಾಭಿವೃದ್ಧಿ ಪ್ರಾಧಿಕಾರ | ಬೆಳಗಾವಿ |
| 2. | ಚಿಕ್ಕಮಗಳೂರು ನಗರಾಭಿವೃದ್ಧಿ ಪ್ರಾಧಿಕಾರ | ಚಿಕ್ಕಮಗಳೂರು |
| 3. | ಮಂಗಳೂರು ನಗರಾಭಿವೃದ್ಧಿ ಪ್ರಾಧಿಕಾರ | ದಕ್ಷಿಣ ಕನ್ನಡ |
| 4. | ಕೊಪ್ಪಳ ನಗರಾಭಿವೃದ್ಧಿ ಪ್ರಾಧಿಕಾರ | ಕೊಪ್ಪಳ |
| 5. | ಚಿತ್ರದುರ್ಗ ನಗರಾಭಿವೃದ್ಧಿ ಪ್ರಾಧಿಕಾರ | ಚಿತ್ರದುರ್ಗ |
| 6. | ಹಾಸನ ನಗರಾಭಿವೃದ್ಧಿ ಪ್ರಾಧಿಕಾರ | ಹಾಸನ |
| 7. | ಹಾವೇರಿ ನಗರಾಭಿವೃದ್ಧಿ ಪ್ರಾಧಿಕಾರ | ಹಾವೇರಿ |
| 8. | ರಾಣೇಬೆನ್ನೂರು ನಗರಾಭಿವೃದ್ಧಿ ಪ್ರಾಧಿಕಾರ | |
| 9. | ಕಾರವಾರ ನಗರಾಭಿವೃದ್ಧಿ ಪ್ರಾಧಿಕಾರ | ಉತ್ತರ ಕನ್ನಡ |
| 10. | ರಾಯಚೂರು ನಗರಾಭಿವೃದ್ಧಿ ಪ್ರಾಧಿಕಾರ | ರಾಯಚೂರು |
| 11. | ಕಲಬುರಗಿ ನಗರಾಭಿವೃದ್ಧಿ ಪ್ರಾಧಿಕಾರ | ಕಲಬುರಗಿ |
| 12. | ಶಿವಮೊಗ್ಗ-ಭದ್ರಾವತಿ ನಗರಾಭಿವೃದ್ಧಿ ಪ್ರಾಧಿಕಾರ | ಶಿವಮೊಗ್ಗ |
| 13. | ಹುಬ್ಬಳ್ಳಿ-ಧಾರವಾಡ ನಗರಾಭಿವೃದ್ಧಿ ಪ್ರಾಧಿಕಾರ | ಧಾರವಾಡ |
| 14. | ಮೈಸೂರು-ನಂಜನಗೂಡು ನಗರಾಭಿವೃದ್ಧಿ ಪ್ರಾಧಿಕಾರ | ಮೈಸೂರು |
| 15. | ತುಮಕೂರು ನಗರಾಭಿವೃದ್ಧಿ ಪ್ರಾಧಿಕಾರ | ತುಮಕೂರು |
| 16. | ಬೀದರ್ ನಗರಾಭಿವೃದ್ಧಿ ಪ್ರಾಧಿಕಾರ | ಬೀದರ್ |
| 17. | ದಾವಣಗೆರೆ-ಹರಿಹರ ನಗರಾಭಿವೃದ್ಧಿ ಪ್ರಾಧಿಕಾರ | ದಾವಣಗೆರೆ |
| 18. | ಚಾಮರಾಜನಗರ-ರಾಮಸಮುದ್ರ ನಗರಾಭಿವೃದ್ಧಿ ಪ್ರಾಧಿಕಾರ | ಚಾಮರಾಜನಗರ |
| 19. | ಬಳ್ಳಾರಿ ನಗರಾಭಿವೃದ್ಧಿ ಪ್ರಾಧಿಕಾರ | ಬಳ್ಳಾರಿ |
| 20. | ವಿಜಯಪುರ ನಗರಾಭಿವೃದ್ಧಿ ಪ್ರಾಧಿಕಾರ | ವಿಜಯಪುರ |
| 21. | ಕೆ.ಜಿ.ಎಫ್. ನಗರಾಭಿವೃದ್ಧಿ ಪ್ರಾಧಿಕಾರ | ಕೋಲಾರ |
| 22. | ಕೋಲಾರ ನಗರಾಭಿವೃದ್ಧಿ ಪ್ರಾಧಿಕಾರ | |
| 23. | ಮಂಡ್ಯ ನಗರಾಭಿವೃದ್ಧಿ ಪ್ರಾಧಿಕಾರ | ಮಂಡ್ಯ |
| 24. | ಗದಗ-ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರ | ಗದಗ |
| 25. | ಉಡುಪಿ-ಮಲ್ಪೆ ನಗರಾಭಿವೃದ್ಧಿ ಪ್ರಾಧಿಕಾರ | ಉಡುಪಿ |
| 26. | ಮಡಿಕೇರಿ ನಗರಾಭಿವೃದ್ಧಿ ಪ್ರಾಧಿಕಾರ | ಕೊಡಗು |
| 27. | ವಿಜಯನಗರ ಪ್ರದೇಶ ನಗರಾಭಿವೃದ್ಧಿ ಪ್ರಾಧಿಕಾರ | ವಿಜಯನಗರ |
| 28. | ಹೊಸಪೇಟೆ ನಗರಾಭಿವೃದ್ಧಿ ಪ್ರಾಧಿಕಾರ | |
| 29. | ಯಾದಗಿರಿ ನಗರಾಭಿವೃದ್ಧಿ ಪ್ರಾಧಿಕಾರ | ಯಾದಗಿರಿ |
| 30. | ಚಿಕ್ಕಬಳ್ಳಾಪುರ ನಗರಾಭಿವೃದ್ಧಿ ಪ್ರಾಧಿಕಾರ | ಚಿಕ್ಕಬಳ್ಳಾಪುರ |
| 31. | ಬಾಗಲಕೋಟೆ ನಗರಾಭಿವೃದ್ಧಿ ಪ್ರಾಧಿಕಾರ | ಬಾಗಲಕೋಟೆ |

ಅನುಬಂಧ - 2

## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** 2024-25ನೇ ಸಾಲಿಗೆ ಮಂಡಿಸಿದ ಆಯವ್ಯಯದ ಕಂಡಿಕೆ-279 ರಲ್ಲಿ ಸಮರ್ಪಕ ಹಾಗೂ ಯೋಜಿತ ನಗರೀಕರಣಕ್ಕಾಗಿ ಒಂದು ಲಕ್ಷಕ್ಕೂ ಅಧಿಕ ಜನಸಂಖ್ಯೆ ಹೊಂದಿರುವ ಎಲ್ಲಾ ಸ್ಥಳೀಯ ಯೋಜನಾ ಪ್ರಾಧಿಕಾರಗಳನ್ನು ನಗರಾಭಿವೃದ್ಧಿ ಪ್ರಾಧಿಕಾರಗಳನ್ನಾಗಿ ಉನ್ನತೀಕರಿಸಲು ಕ್ರಮಕೈಗೊಳ್ಳಲಾಗುವುದು ಘೋಷಿಸಿರುವುದನ್ನು ಅನುಷ್ಠಾನಗೊಳಿಸುವ ಬಗ್ಗೆ.

**ಓದಲಾಗಿದೆ:**
1. ಮಾನ್ಯ ಮುಖ್ಯಮಂತ್ರಿಗಳು 2024-25ನೇ ಸಾಲಿಗೆ ಮಂಡಿಸಿದ ಆಯವ್ಯಯದ ಕಂಡಿಕೆ-279.
2. ಆಯುಕ್ತರು, ನಗರಾಭಿವೃದ್ಧಿ ಪ್ರಾಧಿಕಾರಗಳು ಹಾಗೂ ನಗರ ಮತ್ತು ಗ್ರಾಮಾಂತರ ಯೋಜನಾ ಆಯುಕ್ತಾಲಯ ರವರ ಏಕಕಡತ ಸಂಖ್ಯೆ: DTCP-TECHOMISC/124/2024, ದಿನಾಂಕ:06.04.2024.

*******

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮಸಂಖ್ಯೆ (1) ರಲ್ಲಿ ಮಾನ್ಯ ಮುಖ್ಯಮಂತ್ರಿಗಳು 2024-25ನೇ ಸಾಲಿಗೆ ಮಂಡಿಸಿದ ಆಯವ್ಯಯದ ಕಂಡಿಕೆ-279 ರಲ್ಲಿ ಸಮರ್ಪಕ ಹಾಗೂ ಯೋಜಿತ ನಗರೀಕರಣಕ್ಕಾಗಿ ಒಂದು ಲಕ್ಷಕ್ಕೂ ಅಧಿಕ ಜನಸಂಖ್ಯೆ ಹೊಂದಿರುವ ಎಲ್ಲಾ ಸ್ಥಳೀಯ ಯೋಜನಾ ಪ್ರಾಧಿಕಾರಗಳನ್ನು ನಗರಾಭಿವೃದ್ಧಿ ಪ್ರಾಧಿಕಾರಗಳನ್ನಾಗಿ ಉನ್ನತೀಕರಿಸಲು ಕ್ರಮಕೈಗೊಳ್ಳಲಾಗುವುದು ಎಂದು ಘೋಷಿಸಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ (2) ರ ಏಕಕಡತದಲ್ಲಿ ಆಯುಕ್ತರು, ನಗರಾಭಿವೃದ್ಧಿ ಪ್ರಾಧಿಕಾರಗಳು ಹಾಗೂ ನಗರ ಮತ್ತು ಗ್ರಾಮಾಂತರ ಯೋಜನಾ ಆಯುಕ್ತಾಲಯ ರವರು 2011ರ ಜನಗಣತಿಯ ಪ್ರಕಾರ ಹಾವೇರಿ ಜಿಲ್ಲೆ, ರಾಣೇಬೆನ್ನೂರು ಪಟ್ಟಣದ ಜನ ಸಂಖ್ಯೆಯು 1,06,406 ಇರುವುದು ಕಂಡುಬಂದಿದ್ದು, ಸದರಿ ಪಟ್ಟಣಗಳ ಸ್ಥಳೀಯ ಯೋಜನಾ ಪ್ರದೇಶದ ಜನಸಂಖ್ಯೆಯು ಒಂದು ಲಕ್ಷಕ್ಕೂ ಅಧಿಕ ಜನಸಂಖ್ಯೆ ಹೊಂದಿರುವುದರಿಂದ, ರಾಣೆಬೆನ್ನೂರು ಯೋಜನಾ ಪ್ರಾಧಿಕಾರವನ್ನು ಮೇಲ್ದರ್ಜೆಗೇರಿಸಿ, ನಗರಾಭಿವೃದ್ಧಿ ಪ್ರಾಧಿಕಾರವನ್ನಾಗಿ ರಚಿಸಲು ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

ಸರ್ಕಾರದ ಅಧಿಸೂಚನೆ ಸಂಖ್ಯೆ: ವನಇ 227 ಟಿಟಿಪಿ 92, ಬೆಂಗಳೂರು, ದಿನಾಂಕ: 20-10-1992 ರಲ್ಲಿ, ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961 ರ ಕಲಂ 4(ಎ) ರ ಉಪ ಕಲಂ (1)ರಲ್ಲಿ ಪ್ರದತ್ತವಾದ ಅಧಿಕಾರದನ್ವಯ, ರಾಣೇಬೆನ್ನೂರು ಪಟ್ಟಣಕ್ಕೆ ಸ್ಥಳೀಯ ಯೋಜನಾ ಪ್ರದೇಶವನ್ನು ಘೋಷಿಸಿ, ಸದರಿ ಯೋಜನಾ ಪ್ರಾಧಿಕಾರದ ಎಲ್ಲೆಯನ್ನು ನಿಗದಿಪಡಿಸಿ ಆದೇಶಿಸಲಾಗಿದೆ ಮತ್ತು ಸದರಿ ಸ್ಥಳೀಯ ಯೋಜನಾ ಪ್ರದೇಶಕ್ಕೆ ಸರ್ಕಾರದ ಅಧಿಸೂಚನೆ ಸಂಖ್ಯೆ: ವನಇ 252 ಟಿಟಿಪಿ 94 (11), ದಿನಾಂಕ: 27-01-1996 ರಲ್ಲಿ,

ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961 ರ ಕಲಂ 4(ಸಿ)ರಲ್ಲಿ, ರಾಣೇಬೆನ್ನೂರು ಯೋಜನಾ ಪ್ರಾಧಿಕಾರವನ್ನು ರಚಿಸಿ ಆದೇಶಿಸಲಾಗಿದೆ.

ರಾಣೇಬೆನ್ನೂರು ಪಟ್ಟಣವು ಹಾವೇರಿ ಜಿಲ್ಲೆಯ ಕೇಂದ್ರ ಸ್ಥಾನವಾಗಿದ್ದು, ರಾಣೇಬೆನ್ನೂರು ಪಟ್ಟಣದ ಯೋಜನಾಬದ್ಧ ಬೆಳವಣಿಗೆಯ ಉದ್ದೇಶದಿಂದ ಹಾಗೂ ಸದರಿ ಪ್ರದೇಶದ ವ್ಯಾಪ್ತಿಯಲ್ಲಿನ ಅಭಿವೃದ್ಧಿಗಳನ್ನು ನಿಯಂತ್ರಿಸಲು ರಾಣೇಬೆನ್ನೂರು ನಗರಾಭಿವೃದ್ಧಿ ಪ್ರಾಧಿಕಾರವನ್ನಾಗಿ ಪುನರ್ ರಚಿಸಲು ಸರ್ಕಾರವು ನಿರ್ಧರಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ:ನಅಇ 82 ಬೆಮಪ್ರಾ 2024 (ಇ-ಕಡತ),**
**ಬೆಂಗಳೂರು, ದಿನಾಂಕ: 13.06.2024.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ, ಮಾನ್ಯ ಮುಖ್ಯಮಂತ್ರಿಗಳು 2024-25ನೇ ಸಾಲಿಗೆ ಮಂಡಿಸಿದ ಆಯವ್ಯಯದ ಕಂಡಿಕೆ-279 ರಲ್ಲಿ ಘೋಷಿಸಿರುವಂತೆ ಕರ್ನಾಟಕ ನಗರಾಭಿವೃದ್ಧಿ ಪ್ರಾಧಿಕಾರದ ಕಾಯ್ದೆ, 1987 (ಕರ್ನಾಟಕ ಕಾಯ್ದೆ, 34) ರ ಕಲಂ 3ರ ಉಪ ಕಲಂ(1) ರಡಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ತಕ್ಷಣದಿಂದ ಜಾರಿಗೆ ಬರುವಂತೆ ರಾಣೇಬೆನ್ನೂರು ಸ್ಥಳೀಯ ಯೋಜನಾ ಪ್ರದೇಶದ ವ್ಯಾಪ್ತಿಯ ಅಭಿವೃದ್ಧಿಗಾಗಿ ರಾಣೇಬೆನ್ನೂರು ನಗರಾಭಿವೃದ್ಧಿ ಪ್ರಾಧಿಕಾರವನ್ನಾಗಿ ರಚಿಸಿ ಆದೇಶಿಸಿದೆ.

ಈ ಆದೇಶವನ್ನು ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ ಹಿಂಬರಹ ಸಂಖ್ಯೆ: PDS-MED/37/2024, ದಿನಾಂಕ:21.05.2024 ಹಾಗೂ ಆರ್ಥಿಕ ಇಲಾಖೆಯ ಆಇ 290 ವೆಚ್ಚ-9/2024, ದಿನಾಂಕ:10.06.2024 ರಂದು ನೀಡಿರುವ ಸಹಮತಿ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

**(ಲತಾ.ಕೆ)**
ಸರ್ಕಾರದ ಅಧೀನ ಕಾರ್ಯದರ್ಶಿ,
(ಅಭಿವೃದ್ಧಿ ಪ್ರಾಧಿಕಾರ ಮತ್ತು ನಯೋಸೇ)
ನಗರಾಭಿವೃದ್ಧಿ ಇಲಾಖೆ.

**ಇವರಿಗೆ,**

1. ಆಯುಕ್ತರು, ನಗರಾಭಿವೃದ್ಧಿ ಪ್ರಾಧಿಕಾರಗಳು ಹಾಗೂ ನಗರ ಮತ್ತು ಗ್ರಾಮಾಂತರ ಯೋಜನಾ ಆಯುಕ್ತಾಲಯ, ಬೆಂಗಳೂರು.
2. ನಿರ್ದೇಶಕರು, ಪೌರಾಡಳಿತ ನಿರ್ದೇಶನಾಲಯ, ಬೆಂಗಳೂರು.
3. ಜಿಲ್ಲಾಧಿಕಾರಿಗಳು, ಹಾವೇರಿ ಜಿಲ್ಲೆ, ಹಾವೇರಿ.
4. ನಗರ ಮತ್ತು ಗ್ರಾಮಾಂತರ ಯೋಜನಾ ನಿರ್ದೇಶಕರು, ಬೆಂಗಳೂರು.
5. ನಗರ ಮತ್ತು ಗ್ರಾಮಾಂತರ ಯೋಜನಾ ಅಪರ ನಿರ್ದೇಶಕರು, ಧಾರವಾಡ ವಲಯ, ಧಾರವಾಡ.

6. ಜಂಟಿ ನಿರ್ದೇಶಕರು, ನಗರಾಭಿವೃದ್ಧಿ ಇಲಾಖೆ (ಯೋಜನೆ).
7. ಸದಸ್ಯ ಕಾರ್ಯದರ್ಶಿ, ರಾಣೇಬೆನ್ನೂರು ಯೋಜನಾ ಪ್ರಾಧಿಕಾರ, ರಾಣೇಬೆನ್ನೂರು.
8. ಸಹಾಯಕ ನಿರ್ದೇಶಕರು, ನಗರ ಮತ್ತು ಗ್ರಾಮಾಂತರ ಯೋಜನಾ ಇಲಾಖೆ, ಹಾವೇರಿ.
9. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.

**ಪ್ರತಿ:**

1. ಮಾನ್ಯ ಮುಖ್ಯಮಂತ್ರಿಯವರ ಅಪರ ಮುಖ್ಯ ಕಾರ್ಯದರ್ಶಿ ರವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
2. ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
3. ಸರ್ಕಾರದ ಕಾರ್ಯದರ್ಶಿ ರವರ ಆಪ್ತ ಶಾಖೆ, ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ, ಬಹುಮಹಡಿಗಳ ಕಟ್ಟಡ.
4. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (Exp 3 ಮತ್ತು 9), ವಿಧಾನಸೌಧ.
5. ಸರ್ಕಾರದ ಕಾರ್ಯದರ್ಶಿಯವರ ಆಪ್ತ ಶಾಖೆ, ನಗರಾಭಿವೃದ್ಧಿ ಇಲಾಖೆ.